**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ, ನಂಬರ 523 /2018 ಸಿ.ಡಬ್ಲೂ.8 ಪಿ.ಡಬ್ಲೂ.7

| | |
|---|---|
| ಹೆಸರು | ಸುರೇಶಬಾಬು |
| ತಂದೆ/ಗಂಡ | ರುದ್ರಪ್ಪಾ |
| ವಯಸ್ಸು | 59 ವರ್ಷ |
| ಉದ್ಯೋಗ | ಸಿ.ಪಿ.ಐ ಗೋಕಾಕ |
| ವಾಸಸ್ಥಳ | ಗೋಕಾಕ |

ದಿನಾಂಕ 18-03-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ನಾನು ದಿಃ 25-01-2017 ರಿಂದ ದಿಃ 04.10.2018 ರವರೆಗೆ ಪಿ.ಎಸ್.ಐ ಅಂತಾ ಆಳಂದ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 02-04-2018 ರಂದು 19.00 ಗಂಟೆಗೆ ನಾನು ಠಾಣೆಯಲ್ಲಿ ಇದ್ದಾಗ ಚಾಸ-1 ರವರು ನೀಡಿದ ಗಣಕೀಕೃತ ದೂರಿನ ಸಾರಾಂಶದ ಮೇರೆಗೆ ಗುನ್ಹಾ ಸಂಖ್ಯೆ 76/2018 ಅಂತಾ ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತೇನೆ. ಪ್ರ.ವ.ವ.ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ದಿಃ 03-04-2018 ರಂದು ಚಾಸಾ 1 ರವರು ತೋರಿಸಿದ ಗುನ್ಹಾ ಸ್ಥಳದ ಪಂಚನಾಮೆಯನ್ನು ಚಾಸಾ 2 ಮತ್ತು 3 ರವರ ಸಮಕ್ಷಮ ಮಾಡಿ ಸ್ಥಳದಿಂದ ಒಂದು ಹಿಡಿ ಗಾತ್ರದ ಕಲ್ಲನ್ನು ಜಪ್ತಿ ಪಡಿಸಿಕೊಂಡಿರುತ್ತೇನೆ. ದಿಃ 04-04-2018 ರಂದು ಚಾಸಾ 4 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ 29-04-2018 ರಂದು ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ 29-05-2018 ರಂದು ಆರೋಪಿತರನ್ನು ದಸ್ತಗೀರಿ ಮಾಡಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿಃ 30-05-2018 ರಂದು ತನಿಖೆ ಮುಕ್ತಾಯಗೊಂಡಿದ್ದು ಆರೋಪಿತರ ವಿರುದ್ದ ಸಾಕಷ್ಟು ಸಾಕ್ಷಾಧಾರಗಳು ಕಂಡು ಬಂದಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.6 ಎಂದು, ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು 6(ಎ) ಎಂದು ಗುರುತಿಸಲಾಯಿತು. ಪ್ರ.ವ.ವ.ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ. 7ಎ ಎಂದು ಗುರುತಿಸಲಾಯಿತು. ನಿಪಿ. 1 ರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 1 (ಸಿ) ಅಂತಾ ಗುರುತಿಸಲಾಯಿತು. ಸಾಕ್ಷಿಯು ಒಂದು ಹಿಡಿ ಗಾತ್ರದ ಕಲ್ಲನ್ನು ನೋಡಿ ಗುರುತಿಸಿದ್ದು ಅದನ್ನು ಮು.ಮಾ. 1 ಎಂದು, ಸಾಕ್ಷಿಯ ಸಹಿಯನ್ನು ಮು.ಮಾ. 1 (ಎ) ಅಂತಾ ಗುರುತಿಸಲಾಯಿತು. ಸಾಕ್ಷಿಯು ನಿಪಿ. 5 ನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿಯು ನ್ಯಾಯಾಲಯದಲ್ಲ ಇರುವ ಆರೋಪಿತರನ್ನು ನೋಡಿ ಗುರುತಿಸುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ. ಆರ್ ಜೆ ಪಿ ವಕೀಲರಿಂದ:**

ಚಾಸಾ 1 ರವರು ನಿಪಿ. 6 ನ್ನು ಎಲ್ಲಿ ಟೈಪ ಮಾಡಿಸಿದ್ದರು ಅಂತಾ ವಿಚಾರಣೆ ಮಾಡಿರುವುದಿಲ್ಲ. ಸದರಿ ಟೈಪ ಮಾಡಿದವರ ಹೇಳಿಕೆಯನ್ನು ನಾನು ಪಡೆದಿರುವುದಿಲ್ಲ. ಘಟನಾ ಸ್ಥಳಕ್ಕೆ ನಾನು ಭೇಟಿ ಕೊಟ್ಟಾಗ ಎಷ್ಟು ಜನ ಸೇರಿದರು ಅಂತಾ ನನಗೆ ನೆನಪು ಇಲ್ಲ. ಘಟನಾ ಸ್ಥಳದ ಪೂರ್ವ ದಿಕ್ಕಿಗೆ-ರೇವಣಸಿದ್ದೇಶ್ವರ ಕಟ್ಟೆ, ಪಶ್ಚಿಮಕ್ಕೆ-ಫಿರ್ಯಾದಿ ಮನೆ, ಉತ್ತರಕ್ಕೆ-ಶ್ರೀಮಂತ ಮುಲಗೆರವರ ಮನೆ ಮತ್ತು ದಕ್ಷಿಣಕ್ಕೆ ಗ್ರಾಮದಲ್ಲಿ ಹೋಗುವ ರಸ್ತೆ ಇರುತ್ತದೆ. ನಾನು ಸದರಿ ವಿಷಯವನ್ನು ಸಾಭೀತು ಪಡಿಸಿಸಲು ಗ್ರಾಮ ಪಂಚಾಯತಿ ಕಡೆಯಿಂದ ಯಾವುದೇ ದಾಖಲೆಯನ್ನು ಪಡೆದಿರುವುದಿಲ್ಲ. ಮು.ಮಾ.1 ರ ತರಹ ಕಲ್ಲುಗಳು ಎಲ್ಲಾ ಕಡೆಗೆ ಸಾಮಾನ್ಯವಾಗಿ ಸಿಗುತ್ತವೆ ಎಂದರೆ ಸರಿ. ನಾನು ದೂರನ್ನು ಸ್ವೀಕರಿಸಿ ಘಟನಾ ಸ್ಥಳಕ್ಕೆ ಭೇಟಿ ಕೊಟ್ಟು ಪಂಚನಾಮೆ ಮಾಡಿ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿರುತ್ತೇನೆ ಅಂತಾ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ವೈದ್ಯರಿಂದ ನಿಪಿ. 5 ನ್ನು ಪಡೆದಿರುತ್ತೇನೆ ಅಂತಾ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರನ್ನು ದಸ್ತಗೀರ ಮಾಡಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಅಂತಾ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ 1 ರವರರಿಗೆ ಸಹಾಯ ಮಾಡಲು ಸುಳ್ಳು ಪ್ರಕರಣವನ್ನು ದಾಖಲಿಸಿಕೊಂಡು ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿ ಸುಳ್ಳು ವರದಿಗಳನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ